## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2010-11ನೆಯ ಸಾಲಿನಲ್ಲಿ ಮಾಡುವ ಸರ್ಕಾರಿ ನೌಕರರ ವರ್ಗಾವಣೆಗಳ ಬಗ್ಗೆ ಮಾರ್ಗಸೂಚಿಗಳು

**ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 11 ಸೇನೌವ 2010, ಬೆಂಗಳೂರು, ದಿನಾಂಕ: 13.5.2010**

ಓದಲಾಗಿದೆ :

ಸರ್ಕಾರದ ಆದೇಶ ಸಂಖ್ಯೆ: ಡಿಪಿಎಆರ್ 4 ಎಸ್‌ಟಿಆರ್ 2001, ದಿನಾಂಕ 22.11.2001.

ಪ್ರಸ್ತಾವನೆ :

ಮೇಲೆ ಓದಲಾದ ದಿನಾಂಕ 22.11.2001ರ ಸರ್ಕಾರದ ಆದೇಶದಲ್ಲಿ ಸರ್ಕಾರಿ ನೌಕರರ ವರ್ಗಾವಣೆ ಕುರಿತಂತೆ ಮಾರ್ಗಸೂಚಿಗಳನ್ನು ನೀಡಲಾಗಿದೆ. ಈ ಮಾರ್ಗಸೂಚಿಗಳ ಪ್ರಕಾರ ಸರ್ಕಾರಿ ನೌಕರರ ವರ್ಗಾವಣೆಗಳನ್ನು ಪ್ರತಿ ವರ್ಷ ಏಪ್ರಿಲ್ ಮತ್ತು ಮೇ ತಿಂಗಳಲ್ಲಿ ಮಾತ್ರ ಕೆಲವು ಷರತ್ತುಗೊಳಪಟ್ಟು ಮಾಡಬಹುದಾಗಿದೆ. 2010-11ನೆಯ ಸಾಲಿನಲ್ಲಿ ಕೆಲವು ಮಾರ್ಪಾಟುಗಳೊಂದಿಗೆ ಈ ಮಾರ್ಗಸೂಚಿಗಳನ್ನು ಅನುಸರಿಸಲು ತೀರ್ಮಾನಿಸಲಾಗಿದೆ.

**ಆದೇಶ**

2010-11ನೆಯ ಸಾಲಿನಲ್ಲಿ ಪೋಲೀಸು ಸಿಬ್ಬಂದಿ ಮಂಡಳಿ (Police Establishment Board)ಯ ವ್ಯಾಪ್ತಿಗೊಳಪಡುವ ಪೋಲೀಸು ಸಿಬ್ಬಂದಿಯನ್ನು ಮತ್ತು ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧಿನಿಯಮ, 2007ರ ವ್ಯಾಪ್ತಿಗೊಳಪಡುವ ಶಿಕ್ಷಕರನ್ನು ಹೊರತುಪಡಿಸಿ, ಬೇರೆ ಸರ್ಕಾರಿ ನೌಕರರನ್ನು ಈ ಕೆಳಕಂಡ ಸಂದರ್ಭಗಳಲ್ಲಿ ಮಾತ್ರ ವರ್ಗಾವಣೆ ಮಾಡಬಹುದು :-

1) ಖಾಲಿ ಇರುವ ಆಡಳಿತಾತ್ಮಕ ಹಿತದೃಷ್ಟಿಯಿಂದ ಅತ್ಯಾವಶ್ಯಕವಾಗಿ ತುಂಬಬೇಕಾದ ಹುದ್ದೆಗಳ ಪ್ರಕರಣಗಳು
2) ಪತಿ-ಪತ್ನಿ ಪ್ರಕರಣಗಳು
3) ಪರಸ್ಪರ ವರ್ಗಾವಣೆಗಳು - ಸಂಬಂಧಿಸಿದ ಸಿಬ್ಬಂದಿಯ ಒಪ್ಪಿಗೆ ಪತ್ರದೊಂದಿಗೆ
4) ತೀವ್ರತರವಾದ ಖಾಯಿಲೆಯಿಂದ ಬಳಲುತ್ತಿರುವ ನೌಕರರ/ನೌಕರರ ಅವಲಂಬಿತರ/ತಂದೆ ತಾಯಿಯವರ ವೈದ್ಯಕೀಯ ಚಿಕಿತ್ಸೆ/ಆರೋಗ್ಯದ ಹಿತದೃಷ್ಟಿಯಿಂದ ಮಾಡಬೇಕಾದ ವರ್ಗಾವಣೆಗಳು
5) ಸಾರ್ವಜನಿಕ ದೂರಿನ ಮೇರೆಗೆ ಇಲಾಖಾ ವಿಚಾರಣೆಗೊಳಪಟ್ಟ ಪ್ರಕರಣಗಳು
6) ಮುಂಬಡ್ತಿಯಿಂದ ತುಂಬಬೇಕಾದ ಹುದ್ದೆಗಳು - ಖಾಲಿ ಹುದ್ದೆಗಳಿಗೆ ಮಾತ್ರ
7) ಎರಡು ವರ್ಷಗಳಲ್ಲಿ ನಿವೃತ್ತಿ ಹೊಂದಲಿರುವ ಸಿಬ್ಬಂದಿಯ ಕೋರಿಕೆಗಳು
8) ಆಡಳಿತಾತ್ಮಕ ದೃಷ್ಟಿಯಿಂದ ಅವಶ್ಯವಿರುವ ವರ್ಗಾವಣೆಗಳು

2. 'ಸಿ' ಮತ್ತು 'ಡಿ' ಗುಂಪಿನ ನೌಕರರ ವರ್ಗಾವಣೆಯನ್ನು ಸಂಬಂಧಿತ ವೃಂದ ನಿರ್ವಹಣಾ ಪ್ರಾಧಿಕಾರಗಳು ಮಾಡತಕ್ಕದ್ದು. 'ಎ' ಮತ್ತು 'ಬಿ' ಗುಂಪಿನ ಅಧಿಕಾರಿಗಳ ವರ್ಗಾವಣೆಯನ್ನು ವೃಂದ ನಿರ್ವಹಣಾ ಪ್ರಾಧಿಕಾರದ ಶಿಫಾರಸ್ಸಿನ ಆಧಾರದ ಮೇಲೆ ಸಂಬಂಧಿತ ಸಚಿವರ ಅನುಮೋದನೆಯನ್ನು ಪಡೆದು ಮಾಡತಕ್ಕದ್ದು.

3. ಈ ರೀತಿ ಮಾಡಲಾಗುವ ಒಟ್ಟು ವರ್ಗಾವಣೆಗಳು ಸಂಬಂಧಿತ ವೃಂದದ ಕಾರ್ಯಕಾರಿ ವೃಂದಬಲ (Working strength) ದ ಶೇ.3ನ್ನು ಮೀರಬಾರದು.

4. ಮೇಲ್ಕಂಡಂತೆ ವರ್ಗಾವಣೆ ಪ್ರಕ್ರಿಯೆಗಳನ್ನು ವೃಂದ ನಿರ್ವಹಣಾ ಪ್ರಾಧಿಕಾರದ ಶಿಫಾರಸ್ಸುಗಳ ಮೇಲೆ 18.5.2010ರಿಂದ 15.6.2010ರ ಅವಧಿಯಲ್ಲಿ ಮಾಡತಕ್ಕದ್ದು. ಈ ಅವಧಿಯ ನಂತರ ಯಾವುದೇ ವರ್ಗಾವಣೆ ಮಾಡಬೇಕಾದಲ್ಲಿ ಅದಕ್ಕೆ ಮಾನ್ಯ ಮುಖ್ಯಮಂತ್ರಿಯವರ ಪೂರ್ವಾನುಮೋದನೆಯನ್ನು ಪಡೆಯತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

Devaraju
(ದೇವರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಸೇವಾ ನಿಯಮಗಳು-1).

ಇವರಿಗೆ:
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಇವರಿಗೆ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 500 ಪ್ರತಿಗಳನ್ನು ಸಿಆಸುಇ (ಸೇವಾ ನಿಯಮಗಳು-ಬಿ) ಶಾಖೆಗೆ ಕಳುಹಿಸಬೇಕೆಂದು ಕೋರಲಾಗಿದೆ.

ಪ್ರತಿ:
1) ಸರ್ಕಾರದ ಮುಖ್ಯ ಕಾರ್ಯದರ್ಶಿಯವರು
2) ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಯವರು
3) ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿಯವರು
4) ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು
5) ಎಲ್ಲಾ ಇಲಾಖಾ ಮುಖ್ಯಸ್ಥರು/ಪ್ರಾದೇಶಿಕ ಆಯುಕ್ತರು/ಜಿಲ್ಲಾಧಿಕಾರಿಗಳು/ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
6) *ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು
7) *ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು
8)*ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಬೆಂಗಳೂರು
9)*ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗಸೌಧ, ಬೆಂಗಳೂರು
10)*ಪ್ರಧಾನ ಕಾರ್ಯದರ್ಶಿ, ಕರ್ನಾಟಕ ವಿಧಾನ ಮಂಡಲ, ಬೆಂಗಳೂರು
11)*ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ಬೆಂಗಳೂರು
12) ಸರ್ಕಾರದ ಎಲ್ಲಾ ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು
13) ಸಚಿವಾಲಯದ ಎಲ್ಲಾ ಶಾಖೆಗಳು
14) ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು
15) ವಾರದ ಗೆಜೆಟ್ / ಶಾಖಾ ರಕ್ಷಾ ಕಡತ.
(* ಮುಖ ಪತ್ರದೊಂದಿಗೆ)

ವಿ.ಸೂ.: ಈ ಆದೇಶವು http://www.karnataka.gov.in/svahini ವೆಬ್‌ಸೈಟ್‌ನಲ್ಲಿ ಲಭ್ಯವಿದೆ.